**All India Radio: Bangalore**
**National Bulletin In Kannada**
**23.01.2025  19.35 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**23.01.2025  19.35 p.m.**
********************

ಮುಖ್ಯಾಂಶಗಳು

೧. ನೇತಾಜಿ ಸುಭಾಷ್ ಚಂದ್ರ ಬೋಸ್ ಜನ್ಮದಿನದ ಅಂಗವಾಗಿ ಇಂದು ದೇಶಾದ್ಯಂತ ಪರಾಕ್ರಮ ದಿನ ಆಚರಣೆ

೨. ಎಪ್ಪತ್ತಾರನೇ ಗಣರಾಜ್ಯೋತ್ಸವ ದಿನ: ಶಕ್ತಿ ಪ್ರದರ್ಶನಕ್ಕೆ ಭಾರತೀಯ ಸೇನೆ ಸಜ್ಜು

೩. ಮಹಾಕುಂಭ ಮೇಳ: ಮೌನಿ ಅಮಾವಾಸ್ಯೆ ಹಿನ್ನೆಲೆಯಲ್ಲಿ ಹೆಚ್ಚುವರಿ ೧೫೦ ವಿಶೇಷ ರೈಲುಗಳ ಸಂಚಾರ

೪. ಹತ್ತೊಂಬತ್ತು ವರ್ಷದೊಳಗಿನ ಮಹಿಳೆಯರ ಐಸಿಸಿ ಟಿ-೨೦ ವಿಶ್ವಕಪ್: ಶ್ರೀಲಂಕಾ ವಿರುದ್ಧ ಭಾರತಕ್ಕೆ ೬೦ ರನ್‌ಗಳ ಭರ್ಜರಿ ಜಯ

****************

ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ೧೨೮ ನೇ ಜನ್ಮ ದಿನಾಚರಣೆಯನ್ನು  ಇಂದು ಪರಾಕ್ರಮ ದಿನವನ್ನಾಗಿ ದೇಶಾದ್ಯಂತ ಆಚರಿಸಲಾಯಿತು. ಸಂಸ್ಕೃತಿ ಸಚಿವಾಲಯವು ಮೂರು ದಿನಗಳ ಆಚರಣೆಯನ್ನು ಆಯೋಜಿಸಿದ್ದು, ನೇತಾಜಿಯವರ ಜನ್ಮಸ್ಥಳವಾದ ಒಡಿಶಾದ ಕಟಕ್‌ನಲ್ಲಿ ಪ್ರಧಾನ ಕಾರ್ಯಕ್ರಮ ನಡೆಯಿತು. ಸುಭಾಷ್ ಚಂದ್ರ ಬೋಸ್ ಅವರ ನಿವಾಸವನ್ನು ಈಗ ವಸ್ತುಸಂಗ್ರಹಾಲಯವಾಗಿ ಪರಿವರ್ತಿಸಲಾಗಿದೆ.

ಇನ್ನೊಂದೆಡೆ, ನವದೆಹಲಿಯ ಸಂವಿಧಾನ್ ಸದನದ ಸೆಂಟ್ರಲ್ ಹಾಲ್‌ನಲ್ಲಿ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮ ವಾರ್ಷಿಕೋತ್ಸವದಂದು ಪ್ರಧಾನಿ ನರೇಂದ್ರ ಮೋದಿ, ನೇತಾಜಿ ಅವರಿಗೆ ಗೌರವ ನಮನ ಸಲ್ಲಿಸಿದರು. ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಇತರೆ ನಾಯಕರು ಸಹ ಗೌರವ ಸಲ್ಲಿಸಿದರು.

ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮದಿನವನ್ನು ಇಂದು ಪರಾಕ್ರಮ ದಿನವಾಗಿ ಆಚರಿಸುತ್ತಿರುವ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ನೇತಾಜಿ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ.

ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಷ್ಟ್ರಪತಿ ಅವರು, ನೇತಾಜಿ ಅವರು ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಸ್ಫೂರ್ತಿಯ ಮತ್ತು ದೃಢಸಂಕಲ್ಪದ ನಾಯಕರಾಗಿದ್ದರು. ಅವರು, ಸ್ವಾತಂತ್ರ್ಯ ಹೋರಾಟದಲ್ಲಿ ಲಕ್ಷಾಂತರ ಜನರ ಸೇರ್ಪಡೆಗೆ ಸ್ಫೂರ್ತಿಯಾಗಿದ್ದರು ಎಂದು ಹೇಳಿದ್ದಾರೆ.

ನೇತಾಜಿ ಅವರ ಸ್ವಾತಂತ್ರ್ಯ ಗಳಿಸುವ ನಿರಂತರ ಬದ್ಧತೆ ಮತ್ತು ಆಜಾದ್ ಹಿಂದ್ ಫೌಜ್ ಮೂಲಕ ತಮ್ಮ ಧೈರ್ಯಶಾಲಿ ನಾಯಕತ್ವದಿಂದ ಭಾರತದ ಯುವಪೀಳಿಗೆಗೆ ಇಂದಿಗೂ ಸ್ಫೂರ್ತಿ ತುಂಬುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ತಮ್ಮ ಸಂದೇಶದಲ್ಲಿ, ಭಾರತದ ಸ್ವಾತಂತ್ರ್ಯಕ್ಕೆ ನೇತಾಜಿ ಅವರ ಬದ್ಧತೆ ಅಸಾಧಾರಣವಾಗಿತ್ತು. ಅವರ ಶೌರ್ಯ ಮತ್ತು ದೂರದೃಷ್ಟಿಗೆ ಆಜಾದ್ ಹಿಂದ್ ಫೌಜ್ ಒಂದು ಸಂಕೇತವಾಗಿತ್ತು. ಭಾರತವನ್ನು ವಿದೇಶಿ ಆಡಳಿತದಿಂದ ಮುಕ್ತಗೊಳಿಸುವಲ್ಲಿ ಅವರ ಕೊಡುಗೆ ಅಸಮಾನ್ಯ. ಮಾತೃಭೂಮಿಗಾಗಿ ಅವರು, ನಿಸ್ವಾರ್ಥ ಸೇವೆಯನ್ನು ಸಲ್ಲಿಸಿದರು ಎಂದು ಸ್ಮರಿಸಿದ್ದಾರೆ.

ನೇತಾಜಿ ಸುಭಾಷ್ ಚಂದ್ರ ಬೋಸ್ ಅವರು, ಭಾರತದ ಸ್ವಾತಂತ್ರ್ಯ ಚಳುವಳಿಗೆ ಅಸಾಧಾರಣ ಕೊಡುಗೆ ನೀಡಿದ್ದಾರೆ. ಅವರು, ಶೌರ್ಯ ಮತ್ತು ದೃಢ ಸಂಕಲ್ಪದ ಪ್ರತೀಕವಾಗಿದ್ದು, ಅವರ ದೂರದೃಷ್ಟಿ ಇಂದಿಗೂ ದೇಶಕ್ಕೆ ಸ್ಫೂರ್ತಿಯಾಗಿದ್ದು, ಅವರ ಕನಸಿನ ಭಾರತ ನಿರ್ಮಾಣ ನಿಟ್ಟಿನಲ್ಲಿ ನಾವು ಕಾರ್ಯ ನಿರ್ವಹಿಸೋಣ ಎಂದು ಇದೇ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

ಧ್ವನಿ: ಪ್ರಧಾನಮಂತ್ರಿ

****************

ಇದೇ ೨೬ ರಂದು ನವದೆಹಲಿಯ ಕರ್ತವ್ಯ ಪಥದಲ್ಲಿ ೭೬ನೇ ಗಣರಾಜ್ಯೋತ್ಸವದಂದು ಭಾರತೀಯ ಸೇನೆಯು ತನ್ನ ಶಕ್ತಿಯನ್ನು ಪ್ರದರ್ಶಿಸಲು ಸಂಪೂರ್ಣವಾಗಿ ಸಜ್ಜಾಗಿದೆ.

ಈ ಕುರಿತು ನವದೆಹಲಿಯಲ್ಲಿ ಇಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ಮೇಜರ್ ಜನರಲ್ ಸುಮಿತ್ ಮೆಹ್ತಾ, ಈ ಬಾರಿ ಯುದ್ಧಭೂಮಿ ಕಣ್ಗಾವಲು ವ್ಯವಸ್ಥೆ ಮತ್ತು 'ಪ್ರಲೇ' ಶಸ್ತ್ರಾಸ್ತ್ರ ವ್ಯವಸ್ಥೆಯ ಡಿಆರ್‌ಡಿಒ ಚಿತ್ರಣವು ಮೆರವಣಿಗೆಯ ಪ್ರಮುಖ ಆಕರ್ಷಣೆಯಾಗಲಿದೆ ಎಂದು ತಿಳಿಸಿದರು.

ಮೆರವಣಿಗೆಯ ಸಮಯದಲ್ಲಿ, ಭೀಷ್ಮ ಟಿ೯೦ ಟ್ಯಾಂಕ್, ನಾಗ್ ಕ್ಷಿಪಣಿ ವ್ಯವಸ್ಥೆ, ಬಜರಂಗ್ ವಿಶೇಷ ಬೆಳಕಿನ ವಾಹನ, ನಂದಿಘೋಷ್ ತುರ್ತು ಪ್ರತಿಕ್ರಿಯೆ ಪಡೆಯ ವಾಹನ, ಬ್ರಹ್ಮೋಸ್, ಅಗ್ನಿಬಾನ್, ಪಿನಾಕಾ, ಆಕಾಶ್ ಶಸ್ತ್ರಾಸ್ತ್ರ ವ್ಯವಸ್ಥೆಯು ದೇಶದ ಮಿಲಿಟರಿ ಶಕ್ತಿಯನ್ನು ಪ್ರದರ್ಶಿಸಲಿದೆ. ಅಲ್ಲದೆ, ಸಶಸ್ತ್ರ ಪಡೆಗಳು, ಕೇಂದ್ರ ಸಶಸ್ತ್ರ ಪೊಲೀಸ್ ಪಡೆ ಮತ್ತು ಎನ್‌ಸಿಸಿ ತುಕಡಿಯು ಸಹ ಮೆರವಣಿಗೆಯಲ್ಲಿ ಭಾಗವಹಿಸಲಿದೆ. ಗಣರಾಜ್ಯೋತ್ಸವ ಮೆರವಣಿಗೆಯು ಇದೇ ೨೬ ರಂದು ಬೆಳಗ್ಗೆ ೧೦:೩೦ ಕ್ಕೆ ಪ್ರಾರಂಭವಾಗಲಿದ್ದು, ೯೦ ನಿಮಿಷಗಳ ಕಾಲ ಮುಂದುವರಿಯಲಿದೆ ಎಂದು ಅವರು ವಿವರಿಸಿದರು.

ಗಣರಾಜ್ಯೋತ್ಸವದ ಮೆರವಣಿಗೆಯಲ್ಲಿ ಭಾರತೀಯ ಸೇನಾ ಕವಾಯತಿನ ನೇತೃತ್ವ ವಹಿಸಲಿರುವ ಸಿಗ್ನಲ್ಸ್ ಕಾರ್ಪ್ಸ್‌ನ ಕ್ಯಾಪ್ಟನ್ ರಿತಿಕಾ ಖರೇಟಾ, ಆಕಾಶವಾಣಿಯೊಂದಿಗೆ ಮಾತನಾಡಿ, ಈ ಉತ್ತಮ ಅವಕಾಶವನ್ನು ಒದಗಿಸಿದ್ದಕ್ಕಾಗಿ ಭಾರತೀಯ ಸೇನೆಗೆ ಧನ್ಯವಾದ ಅರ್ಪಿಸಿದರು.

ಇಂಡೋನೇಷ್ಯಾ ತುಕಡಿ ಮತ್ತು ಬ್ಯಾಂಡ್, ಈ ವರ್ಷದ ಗಣರಾಜ್ಯೋತ್ಸವದ ಮೆರವಣಿಗೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ಇಂಡೋನೇಷ್ಯಾ ಸೇನೆಯ ಬ್ರಿಗೇಡಿಯರ್ ಕ್ರಿಸ್ಟೋಮಿ ಸಿಯಾಂತುರಿ, ೩೫೨ ಇಂಡೋನೇಷ್ಯಾ ಸೈನಿಕರು ಮೆರವಣಿಗೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಗಣರಾಜ್ಯೋತ್ಸವದ ಮೆರವಣಿಗೆಯಲ್ಲಿ ವಿವಿಧ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರ ಸಚಿವಾಲಯಗಳಿಂದ ಒಟ್ಟು ೨೬ ಸ್ತಬ್ಧಚಿತ್ರಗಳು ದೇಶದ ವೈವಿಧ್ಯತೆ ಮತ್ತು ಸಾಂಸ್ಕೃತಿಕ ಒಳಗೊಳ್ಳುವಿಕೆಯನ್ನು ಪ್ರಸ್ತುತಪಡಿಸಲಿವೆ. 'ಸ್ವರ್ಣಿಮ್ ಭಾರತ್: ವಿರಾಸತ್ ಔರ್ ವಿಕಾಸ್' ಎಂಬ ವಿಷಯವನ್ನು ಆಧರಿಸಿ ಸ್ತಬ್ಧಚಿತ್ರಗಳನ್ನು ರಚಿಸಲಾಗಿದೆ.

****************

ಸ್ಮಾರ್ಟ್‌ಫೋನ್ ರಫ್ತಿನಲ್ಲಿ ಭಾರತವು ವಿಶ್ವದ ಎರಡನೇ ಶ್ರೇಯಾಂಕಿತ ದೇಶವಾಗಿದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಇಂಗ್ಲಿಷ್ ದಿನಪತ್ರಿಕೆಯ ಲೇಖನವನ್ನು ಇಂದು ಹಂಚಿಕೊಂಡ ಅವರು, ಉತ್ಪನ್ನ ಸಂಬಂಧಿತ ಪ್ರೋತ್ಸಾಹಕ ಯೋಜನೆಯು ಜಾಗತಿಕ ಸ್ಪರ್ಧಾತ್ಮಕತೆ, ಕೌಶಲ್ಯ ಮತ್ತು ಉದ್ಯೋಗ ಸೃಷ್ಟಿಗೆ ಚಾಲನೆ ನೀಡಿದೆ. ಈ ವಲಯವು ವಿಶ್ವದ ಅತ್ಯುತ್ತಮ ದೇಶಗಳೊಂದಿಗೆ ಸ್ಪರ್ಧಿಸಲು ಸಿದ್ಧವಾಗಿದೆ ಎಂದು ತಿಳಿಸಿದರು.

****************

ಮೌನಿ ಅಮಾವಾಸ್ಯೆಯ ಸಂದರ್ಭದಲ್ಲಿ ನಡೆಯುವ ಮಹಾಕುಂಭದಲ್ಲಿ ಹೆಚ್ಚಿನ ಸಂಖ್ಯೆಯ ಭಕ್ತರ ದಟ್ಟಣೆಯನ್ನು ತಗ್ಗಿಸಲು ಪ್ರಯಾಗ್‌ರಾಜ್ ರೈಲ್ವೆ ವಿಭಾಗವು ೧೫೦ಕ್ಕೂ ಹೆಚ್ಚು ವಿಶೇಷ ರೈಲುಗಳನ್ನು ಓಡಿಸಲು ನಿರ್ಧರಿಸಿದೆ.

ಈ ವಿಶೇಷ ರೈಲುಗಳನ್ನು ಪ್ರಯಾಗ್‌ರಾಜ್‌ನ ಎಲ್ಲಾ ಒಂಬತ್ತು ನಿಲ್ದಾಣಗಳಿಂದ ಕಾರ್ಯನಿರ್ವಹಣೆ ಮಾಡಲಾಗುತ್ತದೆ. ಇದು ಭಕ್ತರಿಗೆ ಸುಗಮ ಪ್ರಯಾಣವನ್ನು ಖಚಿತಪಡಿಸುತ್ತದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

****************

ಶಿವಮೊಗ್ಗದಲ್ಲಿ ಎಫ್‌ಎಂ ನೂತನ ಟ್ರಾನ್ಸ್‌ಮೀಟರ್ ಸ್ಥಾಪನೆಯಾಗಿದ್ದು, ಇಲ್ಲಿ ಪ್ರತ್ಯೇಕ ಸ್ಟುಡಿಯೋ ಸ್ಥಾಪಿಸಲಾಗುವುದು ಎಂದು ಕೇಂದ್ರ ಸಚಿವ ಡಾ. ಎಲ್. ಮುರುಗನ್ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿಂದು ಭದ್ರಾವತಿ ಆಕಾಶವಾಣಿಯ ೧೦ ಕೆ.ಡಬ್ಲೂ ಎಫ್‌ಎಂ ಟ್ರಾನ್ಸ್‌ಮೀಟರ್‌ಗೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಇದಕ್ಕಾಗಿ ಕೇಂದ್ರ ಸರ್ಕಾರ ಹಣಕಾಸು ನೆರವು ನೀಡಿದೆ ಎಂದು ತಿಳಿಸಿದ್ದಾರೆ.

ಈ ಟ್ರಾನ್ಸ್‌ಮೀಟರ್‌ನಿಂದ ಆಕಾಶವಾಣಿ ಭದ್ರಾವತಿ ವ್ಯಾಪ್ತಿಯು ಶಿವಮೊಗ್ಗ, ದಾವಣಗೆರೆ ಮತ್ತು ಚಿಕ್ಕಮಗಳೂರು ಜಿಲ್ಲೆಗಳೊನ್ನೊಳಗೊಂಡಂತೆ ೬೦ ಕಿಲೋ ಮೀಟರ್‌ಗೂ ಹೆಚ್ಚು ವಿಸ್ತರಿಸಲಿದೆ. ಕರ್ನಾಟಕದ ಸಾಂಸ್ಕೃತಿಕ ಮತ್ತು ಮಾಹಿತಿ ಪ್ರಸಾರ ಕ್ಷೇತ್ರದಲ್ಲಿ ಇದು ಹೊಸ ಮೈಲಿಗಲ್ಲಾಗಲಿದೆ ಎಂದು ಹೇಳಿದ್ದಾರೆ.

ಸಂಸದ ಬಿ.ವೈ.ರಾಘವೇಂದ್ರ ಮಾತನಾಡಿ, ನೂತನ ಟ್ರಾನ್ಸ್‌ಮೀಟರ್‌ನಿಂದ ೬೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಕಾರ್ಯಕ್ರಮ ಕೇಳಬಹುದಾಗಿದೆ ಎಂದು ತಿಳಿಸಿದ್ದಾರೆ.

****************

ಭಾರತದಲ್ಲಿ ಪ್ರತಿ ವರ್ಷ ಜನವರಿ ೨೪ ರಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನು ಆಚರಿಸಲಾಗುತ್ತದೆ. ಇದನ್ನು ೨೦೦೮ ರಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ಮತ್ತು ಭಾರತ ಸರ್ಕಾರವು ಸಮಾಜದಲ್ಲಿ  ಹೆಣ್ಣು ಮಕ್ಕಳು ಎದುರಿಸುತ್ತಿರುವ ಅಸಮಾನತೆಗಳ ಬಗ್ಗೆ ಸಾರ್ವಜನಿಕ ಜಾಗೃತಿ ಮೂಡಿಸಲು ಪ್ರಾರಂಭಿಸಿತು.  ಈ ದಿನವು ಹೆಣ್ಣುಮಕ್ಕಳನ್ನು ಸಬಲೀಕರಣಗೊಳಿಸಲು ಮತ್ತು ರಕ್ಷಿಸಲು ಅಗತ್ಯವಿರುವ ಸಾಮೂಹಿಕ ಪ್ರಯತ್ನವನ್ನು ನೆನಪಿಸುತ್ತದೆ.

ಪ್ರಯಾಣಿಕರ ಸುರಕ್ಷತೆಯಲ್ಲಿ ಪ್ರಮುಖ ಪಾಲುದಾರರಾಗಿ, ರೈಲ್ವೆ ಸಂರಕ್ಷಣಾ ಪಡೆಯು ಭಾರತದ ವಿಶಾಲ ರೈಲ್ವೆ ಜಾಲದಾದ್ಯಂತ ಹೆಣ್ಣು ಮಕ್ಕಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಪ್ರಮುಖ ನಿಲ್ದಾಣಗಳಲ್ಲಿ ಸಹಾಯವಾಣಿ ವಿಭಾಗಗಳು ಮತ್ತು ದಿನದ ೨೪ ಗಂಟೆಗಳು ಭದ್ರತಾ ಸಹಾಯವಾಣಿಯಂತಹ ಆರ್‌ಪಿಎಫ್ ಉಪಕ್ರಮಗಳು ಸಂಕಷ್ಟದಲ್ಲಿರುವ ಹೆಣ್ಣುಮಕ್ಕಳಿಗೆ ತಕ್ಷಣದ ಸಹಾಯವನ್ನು ಒದಗಿಸುತ್ತವೆ. ಮಕ್ಕಳ ಸಹಾಯವಾಣಿ ಸಂಖ್ಯೆ-೧೦೯೮ ಕ್ಕೆ ಕರೆ ಮಾಡಬಹುದಾಗಿದೆ.

ರೈಲ್ವೆ ರಕ್ಷಣಾ ಪಡೆಯ 'ಆಪರೇಷನ್ ನನ್ಹೆ ಫರಿಸ್ತೇ' ಮೂಲಕ ೨೦೨೪ರಲ್ಲಿ ೪ ಸಾವಿರದ ೪೭೨ ಬಾಲಕಿಯರು ಸೇರಿದಂತೆ ೧೫ ಸಾವಿರದ ೭೦೩ ಮಕ್ಕಳನ್ನು ರಕ್ಷಿಸಲಾಗಿದೆ. ಅಂತೆಯೇ, 'ಮೇರಿ ಸಹೇಲಿ' ಉಪಕ್ರಮದಲ್ಲಿ ರೈಲು ಪ್ರಯಾಣದ ಸಮಯದಲ್ಲಿ ಮಹಿಳೆಯರು ಮತ್ತು ಹೆಣ್ಣು ಮಕ್ಕಳನ್ನು ರಕ್ಷಿಸಲು ಮಹಿಳಾ ಆರ್‌ಪಿಎಫ್ ತಂಡಗಳನ್ನು ನಿಯೋಜಿಸಲಾಗಿದೆ.

'ಬೇಟಿ ಬಚಾವೋ, ಬೇಟಿ ಪಡಾವೋ' ಅಭಿಯಾನಕ್ಕೆ ಅನುಗುಣವಾಗಿ ಹೆಣ್ಣು ಮಕ್ಕಳಿಗೆ ಸುರಕ್ಷಿತ ಮತ್ತು ಸಬಲೀಕರಣದ ವಾತಾವರಣವನ್ನು ಸೃಷ್ಟಿಸಲು ರೈಲ್ವೆ ರಕ್ಷಣಾ ಪಡೆಯು ಬದ್ಧವಾಗಿದೆ ಎಂದು ನೈಋತ್ಯ ರೈಲ್ವೆ ವಿಭಾಗದ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ. ಮಂಜುನಾಥ್ ಕನಮಡಿ ತಿಳಿಸಿದ್ದಾರೆ.

****************

ಕೌಲಾಲಂಪುರದ ಬಯುಮಾಸ್ ಓವಲ್ ಕ್ರೀಡಾಂಗಣದಲ್ಲಿ ಇಂದು ನಡೆದ ಐಸಿಸಿ ೧೯ ವರ್ಷದೊಳಗಿನ ಮಹಿಳೆಯರ ಟಿ-೨೦ ವಿಶ್ವಕಪ್ ೨೦೨೫ರ 'ಎ' ಗುಂಪಿನ ಪಂದ್ಯದಲ್ಲಿ ಶ್ರೀಲಂಕಾ ವಿರುದ್ಧ ಭಾರತ ವನಿತೆಯರ ತಂಡ ೬೦ ರನ್‌ಗಳ ಭರ್ಜರಿ ಜಯ ಸಾಧಿಸಿದೆ.

ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೧೮ ರನ್ ಗಳಿಸಿತು.

ಈ ಗುರಿಯನ್ನು ಬೆನ್ನತ್ತಿದ ಶ್ರೀಲಂಕಾ ಮಹಿಳೆಯರ ತಂಡ, ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೫೮ ಗಳಿಸಲಷ್ಟೇ ಶಕ್ತವಾಯಿತು.

****************

ಮಹಿಳಾ ಹಾಕಿ ಇಂಡಿಯಾ ಲೀಗ್ ಪಂದ್ಯಾವಳಿಯಲ್ಲಿ ಇಂದು ಸಂಜೆ ರಾಂಚಿಯಲ್ಲಿ ನಡೆಯುತ್ತಿರುವ ಪಂದ್ಯದಲ್ಲಿ ಒಡಿಶಾ ವಾರಿಯರ್ಸ್ ಮತ್ತು ದೆಹಲಿ ಎಸ್‌ಜಿ ಪೈಪರ್ಸ್ ತಂಡಗಳು ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ.

ರಾತ್ರಿ ೮-೧೫ಕ್ಕೆ ರೂರ್ಕೆಲಾದಲ್ಲಿ ಆರಂಭವಾಗಲಿರುವ ಪುರುಷರ ವಿಭಾಗದ ಪಂದ್ಯದಲ್ಲಿ ತಮಿಳುನಾಡು ಡ್ರಾಗನ್ಸ್ ತಂಡ, ಹೈದರಬಾದ್ ತೂಫಾನ್ಸ್ ತಂಡದ ಎದುರು ಸೆಣಸಲಿದೆ.

****************

ಜಕಾರ್ತದಲ್ಲಿ ಇಂದು ನಡೆದ ಇಂಡೋನೇಷಿಯಾ ಮಾಸ್ಟರ್ಸ್ ಸೂಪರ್ ೫೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್‌ನ ಎರಡನೇ ಸುತ್ತಿನಲ್ಲಿ ಜಪಾನ್‌ನ ಕೆಂಟಾ ನಿಶಿಮೋಟೋ, ಭಾರತೀಯ ಶಟ್ಲರ್ ಲಕ್ಷ್ಯ ಸೇನ್ ಅವರನ್ನು ಸೋಲಿಸಿದ್ದಾರೆ.

********ಮುಕ್ತಾಯ********